# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2009-10ನೇ ಸಾಲಿನಿಂದ ಮೀನುಗಾರಿಕೆ ಸಲಕರಣೆ ಕಿಟ್ಟು ವಿತರಣೆ ಎಂಬ ಹೊಸ ಯೋಜನೆಯನ್ನು ಅನುಷ್ಠಾನಗೊಳಿಸಲು ಆಡಳಿತಾತ್ಮಕ ಮಂಜೂರಾತಿ.

ಓದಲಾಗಿದೆ:- ಪತ್ರ ಸಂಖ್ಯೆ:ಪಂವಾಂಯೋ/26/2009-10 ದಿನಾಂಕ:26-05-2009 ಮತ್ತು 03-07-2009.

******

## ಪ್ರಸ್ತಾವನೆ:

ಮೇಲೆ ಓದಲಾದ ಮೀನುಗಾರಿಕೆ ನಿರ್ದೇಶಕರ ಪತ್ರಗಳಲ್ಲಿ ರಾಜ್ಯದಲ್ಲಿ ಮೀನುಗಾರಿಕೆ ಅತೀ ಮುಖ್ಯವಾದ ಉದ್ಯಮವಾಗಿದ್ದು, ಅಗಾಧವಾದ ಕಡಲ ಸಂಪನ್ಮೂಲ, ಹಿನ್ನೀರು ಮತ್ತು ಸಿಹಿನೀರಿನ ನೆಲೆಗಳು ಮೀನು ಉತ್ಪಾದನೆಯ ಪ್ರಮುಖ ಆಕರಗಳಾಗಿದ್ದು, ಒಟ್ಟು 5.20 ಲಕ್ಷ ಹೆಕ್ಟೇರ್ ಜಲವಿಸ್ತೀರ್ಣ ಪ್ರದೇಶ ಹೊಂದಿದ್ದು, ಮೀನು ಉತ್ಪಾದನೆಗೆ ವಿಪುಲ ಅವಕಾಶಗಳಿರುವುದರಿಂದ ಸುಮಾರು 3.61 ಲಕ್ಷ ಮೀನುಗಾರರು ಸಕ್ರಿಯ ಮೀನುಗಾರಿಕೆಯಲ್ಲಿ ತೊಡಗಿರುತ್ತಾರೆಂದು ತಿಳಿಸಿರುತ್ತಾರೆ.

ಕರಾವಳಿ ಜಿಲ್ಲೆಗಳಲ್ಲಿ ವಿವಿಧ ಬಗೆಯ ಯಾಂತ್ರೀಕೃತವಲ್ಲದ ಮೀನುಗಾರಿಕೆ ದೋಣಿಗಳನ್ನು (ಪಾತಿ ದೋಣಿ, ರಂಪಣಿ ದೋಣಿ ಇತ್ಯಾದಿ) ಬಳಸಿ ಮೀನುಗಾರಿಕೆ ನಡೆಸುವ ಬಡ ಮೀನುಗಾರರಿಗೆ ಮೀನುಗಾರಿಕೆ ಸಲಕರಣೆ ಒದಗಿಸುವುದು ಅತ್ಯಗತ್ಯವಾಗಿರುತ್ತದೆ. ರಾಜ್ಯದಲ್ಲಿ ಒಳನಾಡು ಮೀನುಗಾರಿಕೆಗೆ ಸಾಕಷ್ಟು ಒತ್ತು ನೀಡುತ್ತಿದ್ದು, ಮೀನುಗಾರಿಕೆಯ ಸರ್ವತೋಮುಖ ಅಭಿವೃದ್ಧಿಗಾಗಿ ಸೃಜನೆಯಾಗಿರುವ ರಾಷ್ಟ್ರೀಯ ಮೀನುಗಾರಿಕೆ ಅಭಿವೃದ್ಧಿ ಮಂಡಳಿಯ ನೆರವಿನೊಡನೆ ರಾಜ್ಯದ ಮೀನು ಉತ್ಪಾದನೆ ಹಾಗೂ ಮೀನುಗಾರರಿಗೆ ಉದ್ಯೋಗಾವಕಾಶಗಳನ್ನು ಹೆಚ್ಚಿಸಲು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಇದರಿಂದ ಒಳನಾಡು ಮೀನು ಉತ್ಪಾದನೆ ಬಹಳಷ್ಟು ಮಟ್ಟಿಗೆ ಹೆಚ್ಚಳಗೊಳಿಸಲು ಸಾಧ್ಯವಾಗುವುದಲ್ಲದೆ ಜಲಾಶಯಗಳಲ್ಲಿ ಮೀನುಗಾರಿಕೆ ಮಾಡುವ ಮೀನುಗಾರರಿಗೆ ಮೀನುಗಳನ್ನು ಹಿಡಿಯಲು ಬಲೆಗಳು ಮತ್ತು ಇತರೆ ಪೂರಕ ಸಾಮಗ್ರಿಗಳನ್ನು ಹೊಂದುವುದು ಅತ್ಯಗತ್ಯವಾಗಿದೆ ಎಂದು ತಿಳಿಸಿರುತ್ತಾರೆ.

ಇಂತಹ ಮೀನು ಹಿಡುವಳಿ ಸಲಕರಣೆ ಸಾಮಗ್ರಿಗಳನ್ನು ಹಾಗೂ ಮೀನು ಕೊಳ್ಳಲು ಮೀನು ವ್ಯಾಪಾರಸ್ಥರು, ಮಧ್ಯವರ್ತಿಗಳು ಹಾಗೂ ಬ್ಯಾಂಕುಗಳಿಂದ ಹೆಚ್ಚು ಬಡ್ಡಿ ತೆರಬೇಕಾಗಿದ್ದು, ಇದರಿಂದ ಬಡ ಮೀನುಗಾರರು ಶೋಷಣೆಗೊಳಗಾಗುತ್ತಿದ್ದಾರೆ. ಇವುಗಳನ್ನು ನಿರಂತರವಾಗಿ ಉಪಯೋಗಿಸುವಾಗ ನದಿಗಳಲ್ಲಿ, ಜಲಾಶಯಗಳಲ್ಲಿ ಬಲೆಗಳು ಕೊಚ್ಚಿ ಹೋಗಿ/ನಾಶವಾಗಿ ಹೋಗುವುದು ಸಾಮಾನ್ಯವಾದ್ದರಿಂದ ಅಗತ್ಯ ಪ್ರಮಾಣದಲ್ಲಿ ಬಲೆಗಳನ್ನು ಖರೀದಿಸಿ ಮೀನುಗಾರರು ತಮ್ಮ ವೃತ್ತಿ ಮುಂದುವರಿಸಿಕೊಂಡು ಹೋಗುವುದು ಕಷ್ಟಕರ. ಇಂತಹ ಸಾಂಪ್ರದಾಯಿಕ ಹಾಗೂ ಬಡ ಮೀನುಗಾರರಿಗೆ ನಿತ್ಯ ಜೀವನಕ್ಕೆ ಸಹಾಯ ಆಗುವ ಉದ್ದೇಶದಿಂದ 2009-10ನೇ ಸಾಲಿನಿಂದ "ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ" ಎಂಬ ಒಂದು ಹೊಸ ಯೋಜನೆಯನ್ನು ಪ್ರಾರಂಭಿಸಲು ಅನುದಾನ ಅವಕಾಶ ಕಲ್ಪಿಸಲಾಗಿದ್ದು, ಸದರಿ ಯೋಜನೆಯಡಿ ಕರಾವಳಿ ಮತ್ತು ಒಳನಾಡಿನಲ್ಲಿ ಸಾಂಪ್ರದಾಯಿಕ ಮೀನುಗಾರರಿಗೆ ಮೀನು ಹಿಡುವಳಿಗೆ ಬೇಕಾದ ಬಲೆ, ಕೊರ್ಯಾಕಲ್ (ಪುಟ್ಟಿ) ಮತ್ತು ಪೂರಕ ಸಾಮಗ್ರಿಗಳನ್ನು ಕಿಟ್ ರೂಪದಲ್ಲಿ ನೀಡಲಾಗುವುದೆಂದು, ಇದರ ಘಟಕ ವೆಚ್ಚವು ರೂ.5000-00 ಆಗಿದ್ದು, ಶೇ.100ರಷ್ಟು ಸಹಾಯಧನ ರೂಪದಲ್ಲಿ ನೀಡಲಾಗುವುದೆಂದು, ಇದಕ್ಕಾಗಿ 2009-10ನೇ ಸಾಲಿನ ಆಯವ್ಯಯದಲ್ಲಿ ಒದಗಿಸಿರುವ ರೂ.50.00 ಲಕ್ಷಗಳ ಅನುದಾನಕ್ಕೆ ಆಡಳಿತಾತ್ಮಕ ಮಂಜೂರಾತಿಯನ್ನು ನೀಡುವಂತೆ ಕೋರಿರುತ್ತಾರೆ.

-2-

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ:ಪಸಂಮೀ 105 ಮೀಇಂಯೋ 2009, ಬೆಂಗಳೂರು ದಿನಾಂಕ:16-07-2009**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, 2009-10ನೇ ಸಾಲಿನಿಂದ "ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ" ಎಂಬ ಹೊಸ ಯೋಜನೆಯನ್ನು ಆಯವ್ಯಯದಲ್ಲಿರುವ ರೂ.50.00 ಲಕ್ಷಗಳ (ಐವತ್ತು ಲಕ್ಷ ರೂಪಾಯಿಗಳು ಮಾತ್ರ) ವೆಚ್ಚದಲ್ಲಿ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ಸಹಾಯಧನ ಮಂಜೂರು ಮಾಡುವ ಕಾರ್ಯವಿಧಾನ ಮತ್ತು ಫಲಾನುಭವಿಗಳಿಗೆ ಸಹಾಯಧನ ಮಂಜೂರು ಮಾಡಲು ವಿಧಿಸಲಾಗುವ ಷರತ್ತು ಮತ್ತು ನಿಬಂಧನೆಗಳನ್ನು ಈ ಆದೇಶದ **ಅನುಬಂಧ**ದಲ್ಲಿ ವಿವರಿಸಿದಂತೆ ಅನುಸರಿಸತಕ್ಕದ್ದು.

ಸದರಿ ವೆಚ್ಚವನ್ನು ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ-00-800-ಇತರ ವೆಚ್ಚ-0-24-ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ (ಯೋಜನೆ) – (106), (422) ಮತ್ತು (423)" ಅಡಿ 2009-10ನೇ ಸಾಲಿನ ಆಯವ್ಯಯದಲ್ಲಿ ಒದಗಿಸಿರುವ ರೂ.50.00 ಲಕ್ಷಗಳ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ/28/ಪಿಎಫ್ಒ/2009 ದಿನಾಂಕ: 17-06-2009ರಲ್ಲಿ ಹಾಗೂ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ/361/ವೆ4/2009 ದಿನಾಂಕ: 09-07-2009ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಿ.ಎಂ.ರಾಜಣ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ(ಮೀ)

ಇವರಿಗೆ:

1) ಮಹಾಲೇಖಪಾಲರು (ಎ ಮತ್ತು ಇ)(ಆಡಿಟ್ 1 ಮತ್ತು 2), ಕರ್ನಾಟಕ, ಬೆಂಗಳೂರು.
2) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
3) ಎಲ್ಲಾ ಮೀನುಗಾರಿಕೆ ಉಪ ನಿರ್ದೇಶಕರಗಳಿಗೆ (ಮೀನುಗಾರಿಕೆ ನಿರ್ದೇಶಕರ ಮುಖಾಂತರ)
4) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4 ಮತ್ತು 5)
5) ಜಂಟಿ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
6) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
7) ಸಂಬಂಧಪಟ್ಟ ಎಲ್ಲಾ ಖಜಾನೆ ಅಧಿಕಾರಿಗಳಿಗೆ (ಮೀನುಗಾರಿಕೆ ನಿರ್ದೇಶಕರ ಮುಖಾಂತರ)
8) ಮಾನ್ಯ ಮೀನುಗಾರಿಕೆ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರ ಆಪ್ತ ಕಾರ್ಯದರ್ಶಿಗಳು,
9) ಶಾಖಾ ರಕ್ಷಾ ಕಡತ: ಹೆಚ್ಚಿನ ಪ್ರತಿಗಳು.

ಆದೇಶ ಸಂಖ್ಯೆ: ಪಸಂಮೀ 105 ಮೀಇಯೋ 2009, ಬೆಂಗಳೂರು ದಿನಾಂಕ:16-07-2009ರ

## ಅನುಬಂಧ

## ಷರತ್ತು ಮತ್ತು ನಿಬಂಧನೆಗಳು

1) ಸದರಿ ಯೋಜನೆಯ ಲಾಭ ಪಡೆಯುವ ಪ್ರತಿಯೊಬ್ಬ ಫಲಾನುಭವಿಯು ಮೀನು ಹಿಡಿಯುವ ವೃತ್ತಿಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರತಕ್ಕದ್ದು.

2) ಸದರಿ ಫಲಾನುಭವಿಯು ಮೀನುಗಾರಿಕೆ ಸಹಕಾರ ಸಂಘದಲ್ಲಿ ಕಳೆದ 3 ವರ್ಷಗಳಿಂದ ಸದಸ್ಯನಾಗಿದ್ದು, ಮೀನುಗಾರಿಕೆ ವೃತ್ತಿ ಕೈಗೊಂಡಿರತಕ್ಕದ್ದು.

3) ಸದರಿ ಫಲಾನುಭವಿಯು ನದಿ/ಜಲಾಶಯಗಳಲ್ಲಿ ಮೂರು ವರ್ಷಗಳ ಅವಧಿಗೆ ಮೀನು ಹಿಡಿಯುವ ಲೈಸೆನ್ಸ್ ಪಡೆದು ಮೀನುಗಾರಿಕೆ ಕೈಗೊಂಡಿರತಕ್ಕದ್ದು.

## ಸಹಾಯಧನ ಮಂಜೂರು ಮಾಡುವ ಕಾರ್ಯವಿಧಾನ

1) ಸಹಾಯಧನವನ್ನು ಕೋರಿ ಬಂದ ಅರ್ಜಿಗಳನ್ನು ತಾಲ್ಲೂಕಿನ ಮೀನುಗಾರಿಕೆ ಅಧಿಕಾರಿಯು ಪರಿಶೀಲಿಸಿ ವಿವರಗಳು ಸರಿಯಿರುವ ಬಗ್ಗೆ ದೃಢೀಕರಿಸಿ, ಜಿಲ್ಲಾ ಮಟ್ಟದ ಅಧಿಕಾರಿಯವರಿಗೆ ಒಂದು ವಾರದೊಳಗಾಗಿ ಮಂಜೂರಾತಿಗೆ ಪ್ರಸ್ತಾವನೆಯನ್ನು ಸಲ್ಲಿಸತಕ್ಕದ್ದು.

2) ಸಹಾಯಧನ ಕೋರಿ ಬಂದ ಅರ್ಜಿಗಳನ್ನು, ಜಿಲ್ಲಾ ಮಟ್ಟದ ಮೀನುಗಾರಿಕೆ ಅಧಿಕಾರಿಯು ಮತ್ತೊಮ್ಮೆ ಪರಿಶೀಲಿಸಿ ವಿವರಗಳನ್ನು ದೃಢೀಕರಿಸಿ ಒಂದು ವಾರದೊಳಗಾಗಿ ಮೀನುಗಾರಿಕೆ ಉಪ ನಿರ್ದೇಶಕರಿಗೆ ಪ್ರಸ್ತಾವನೆ ಸಲ್ಲಿಸತಕ್ಕದ್ದು.

3) ಸಹಾಯಧನವನ್ನು ಮಂಜೂರು ಮಾಡುವ ಅಧಿಕಾರವು ಆಯಾ ವಲಯದ ಮೀನುಗಾರಿಕೆ ಉಪ ನಿರ್ದೇಶಕರಲ್ಲಿ ಪ್ರದತ್ತವಾಗಿರುತ್ತದೆ.

4) ಬಲೆ ಮತ್ತು ಪೂರಕ ಸಾಮಗ್ರಿಗಳನ್ನು ಸಂಬಂಧಪಟ್ಟ ತಾಲ್ಲೂಕು ಮಟ್ಟದ ಮೀನುಗಾರಿಕೆ ಇಲಾಖೆಯ ಅಧಿಕಾರಿಗಳು ನಿಯಮಾನುಸಾರ ಸಾದಿಲ್ವಾರು ಬಿಲ್ಲುಗಳ ಮೂಲಕ ಖರೀದಿಸಿ ಫಲಾನುಭವಿಗಳಿಗೆ ಸಾರ್ವಜನಿಕ ಸಮಾರಂಭಗಳಲ್ಲಿ ಚುನಾಯಿತ ಪ್ರತಿನಿಧಿಗಳ ಸಮ್ಮುಖದಲ್ಲಿ ವಿತರಿಸತಕ್ಕದ್ದು.

5) ಸಹಾಯಧನವು ಸೂಕ್ತವಾಗಿ ಬಳಕೆ ಆಗುತ್ತಿದೆಯೇ ಎಂಬ ಬಗ್ಗೆ ಖಚಿತಪಡಿಸಿಕೊಳ್ಳಲು ನಿರ್ದೇಶನಾಲಯದ ಹಂತದಲ್ಲಿ ತಾಂತ್ರಿಕ ಮೇಲುಸ್ತುವಾರಿ (Monitor) ಮಾಡಲು ಸೂಕ್ತ ವ್ಯವಸ್ಥೆ ಮಾಡಿಕೊಳ್ಳತಕ್ಕದ್ದು.

ಡಿ.ಎಂ. ರಾಜಣ್ಣ
(ಡಿ.ಎಂ.ರಾಜಣ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ(ಮೀ)
16/7.